ಬೆಂಗಳೂರು, ಕೋಲಾರ, ಹಾಸನ, ಚಿತ್ರದುರ್ಗ, ದಾವಣಗೆರೆ, ವಿಜಯನಗರ, ಬಳ್ಳಾರಿ, ರಾಯಚೂರು, ವಿಜಯಪುರ, ಕಲಬುರ್ಗಿ

ದಶಕದ ನಡಿಗೆ... RNI No: KARKAN/2014/54928 ನೊಂದವರ ಧ್ವನಿ

# ಸಹಾಯ ವಾಣಿ

www.sahayavani.com SAHAYAVANI Postal Registration N.o KA/BGW--1862/2024-26 KANNADA DAILY PAPER ಕನ್ನಡ ದಿನಪತ್ರಿಕೆ

ಸಂಪುಟ: 11 Vol:11 ಸಂಚಿಕೆ: 123 Issuse:123 ದಿನಾಂಕ:19-06-2024 Date:19-06-2024 ಬುಧವಾರ Wednesday ಪುಟ:4 Page:4 ರೂ.: 3-00 Rs.3-00

ಸಂಪಾದಕರು: ಎಸ್.ಕೆ.ಒಡೆಯರ್ ಉಪಸಂಪಾದಕರು: ಸುಚಿತ್ರ ಎಸ್. ಒಡೆಯರ್ ಎಂಬಿಎ ಗೌರವ ಸಂಪಾದಕರು: ಗುರುರಾಜು ಎಂ., ಫೋ: 080-31212322 ಮೊ.: 9902543494 E-mail:sahayavany@gmail.com

# ನೀಟ್ ವಿವಾದ ಎನ್‌ಟಿಎಗೆ ಸುಪ್ರೀಂ ನೋಟಿಸ್

ನವದೆಹಲಿ:-

ನೀಟ್ ಪರೀಕ್ಷೆಯ ವಿವಾದದ ನಡುವೆಯೇ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ)ಗೆ ಸುಪ್ರೀಂಕೋರ್ಟ್ ಎಚ್ಚರಿಕೆ ನೀಡಿದ್ದು, ಪರೀಕ್ಷಾ ಪ್ರಕ್ರಿಯೆಯಲ್ಲಿ ಶೇ. 0.001ರಷ್ಟು ನಿರ್ಲಕ್ಷ್ಯವನ್ನೂ ಸಹ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕೆಂದು ನ್ಯಾಯಾಲಯ ಎನ್‌ಟಿಎಗೆ ನೋಟಿಸ್ ನೀಡಿದೆ..

ನೀಟ್ ಪರೀಕ್ಷಾ ಹಗರಣಗಳಿಗೆ ಸಂಬಂಧಿಸಿದ ಹಲವಾರು ದೂರುಗಳ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಪರೀಕ್ಷಾ ಪ್ರಕ್ರಿಯೆ ತನ್ನ ಸಮಗ್ರತೆ ಸಾಮರ್ಥ್ಯ ಕಾಪಾಡಿಕೊಳ್ಳುವ ಮೂಲಕ ಎಲ್ಲ ಅಭ್ಯರ್ಥಿಗಳನ್ನು ಸಮಾನವಾಗಿ ಪರಿಗಣಿಸಲಾಗಿದೆ ಎನ್ನುವುದನ್ನು ಖಚಿತಪಡಿಸಿಕೊಳ್ಳುವುದು ಪರೀಕ್ಷಾ ಸಂಸ್ಥೆಯ ಅತ್ಯಂತ ಜವಾಬ್ದಾರಿಯುತ ಕೆಲಸ ಎಂದು ನ್ಯಾಯಮೂರ್ತಿಗಳು ಹೇಳಿದ್ದಾರೆ.

ಅರ್ಜಿದಾರರಲ್ಲಿ ಶಿಕ್ಷಣತಜ್ಞ ನಿತಿನ್‌ವಿಜಯ್ ಸೇರಿದಂತೆ ನೀಟಿ ಪ್ರತೀಕೆಯನ್ನು ರದ್ದುಪಡಿಸುವ ಬೇಡಿಕೆಗಳು ಸೇರಿ ಮತ್ತೊಂದು ಅರ್ಜಿಯನ್ನು ಸುಪ್ರೀಂಕೋರ್ಟ್ ಇಂದು ವಿಚಾರಣೆ ನಡೆಸಿದೆ.



ನೀಟ್ ವಿವಾದಗಳನ್ನುಗಂಭಿರವಾಗಿ ಪರಿಗಣಿಸಿರುವ ಸುಪ್ರೀಂಕೋರ್ಟ್ ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಗೆ ನೋಟಿಸ್ ನೀಡಿ ಪರೀಕ್ಷೆಯಲ್ಲಿ 0.001ನಿರ್ಲಕ್ಷ್ಯವಿದ್ದರೂ ಅದನ್ನು ಸರಿಪಡಿಸಬೇಕಾದ ಹಾಗೂ ವಿಚಾರಣೆ ನಡೆಸಬೇಕಾದ ಅಗತ್ಯತೆಯನ್ನು ಸುಪ್ರೀಂಕೋರ್ಟ್ ಒತ್ತಿ ಹೇಳಿದೆ.

ಪರೀಕ್ಷೆ ತಯಾರಿಯಲ್ಲಿ ವಿದ್ಯಾರ್ಥಿಗಳ ಪ್ರಯತ್ನವನ್ನು ಸೂಕ್ಷ್ಮವಾಗಿ ಪರಿಗಣಿಸಿರುವ ನ್ಯಾಯಾಲಯ, ಜು. 8 ರಂದು ಸಮಗ್ರ ವಿಚಾರಣೆಗಾಗಿ ಇಂದಿನ ಅರ್ಜಿಗಳೊಂದಿಗೆ ಇಂದು ಸಲ್ಲಿಸಿರುವ 2 ಹೊಸ ಅರ್ಜಿಗಳನ್ನೂ ಸಹ ಸೇರ್ಪಡೆ ಮಾಡಿದೆ.

ನ್ಯಾಯಮೂರ್ತಿಗಳಾದ ವಿಕ್ರಂನಾಥ್ ಮತ್ತು ಎಸ್‌ವಿ ಭಟ್ಟಿ ಅವರನ್ನೊಳಗೊಂಡ ಪೀಠ ಇಂದು ನೀಟ್ ವಿವಾದ ಕುರಿತಂತೆ ವಿಚಾರಣೆ ನಡೆಸಿತು.

ಸುಮಾರು 20 ಸಾವಿರ ವಿದ್ಯಾರ್ಥಿಗಳನ್ನು ಪ್ರತಿನಿಧಿಸಿರುವ ನಿತಿನ್‌ವಿಜಯ್ ನೀಟ್ ಪರೀಕ್ಷೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ನ್ಯಾಯಾಲಯ ಆರೋಪಿಸಿ ಡಿಜಿಟಲ್ ಪ್ರತಿಭಟನೆಗಳನ್ನು ನ್ಯಾಯಾಲಯದ ಮುಂದೆ ಎತ್ತಿ ಹಿಡಿದಿದ್ದಾರೆ.

ಕೃಪಾಂಕರ ಅಂಕದ ಆಪಾದನೆಗೊಳಗಾಗಿರುವ ಪೇಪರ್‌ಗಳಲ್ಲಿ ಮತ್ತು ಕೃಪಾಂಕರವಿಲ್ಲದ ಅಂಕವಿಲ್ಲದ ಪತ್ರಿಕೆಗಳಲ್ಲಿನ ಅಂಕದ ವ್ಯತ್ಯಾಸ ಕಂಡು ಬಂದ ಹಿನ್ನೆಲೆ ಮರು ಪರೀಕ್ಷೆಗಾಗಿ ಅರ್ಜಿಯಲ್ಲಿ ಒತ್ತಾಯಿಸಲಾಗಿದೆ.

ವಿದ್ಯಾರ್ಥಿಗಳ ದೂರುಗಳನ್ನು ನಿರ್ಲಕ್ಷಿಸದಂತೆ ಮತ್ತು ಪರೀಕ್ಷೆಯ ಸಂದರ್ಭದಲ್ಲಿ ಯಾವುದೇ ದೋಷಗಳನ್ನು ತ್ವರಿತವಾಗಿ ಸರಿಪಡಿಸುವಂತೆ ಸುಪ್ರೀಂಕೋರ್ಟ್ ಪರೀಕ್ಷಾ ಪ್ರಾಧಿಕಾರಕ್ಕೆ ಕಟ್ಟುನಿಟ್ಟಾಗಿ ಆದೇಶಿಸಿದೆ.

ಇದೇ ವಿಷಯಕ್ಕೆ ಸಂಬಂಧಿಸಿದಂತೆ ಈ ಹಿಂದೆ ಸಲ್ಲಿಕೆಯಾಗಿದ್ದ ಅರ್ಜಿಗಳನ್ನು ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಎನ್‌ಟಿಎಗೆ ನೋಟಿಸ್ ಜಾರಿಗೊಳಿಸಿತು. ಆದರೆ, ಕೌನ್ಸಿಲ್ ಪ್ರಕ್ರಿಯೆ ನಿಲ್ಲಿಸಲು ನಿರಾಕರಿಸಿತ್ತು. ಈ ವಿಷಯಕ್ಕೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಮತ್ತು ಅರ್ಜಿದಾರರು ಸುಪ್ರೀಂ ನಿಲುವನ್ನು ಕುತೂಹಲದಿಂದ ನಿರೀಕ್ಷಿಸುತ್ತಿದ್ದಾರೆ.

ನೀಟ್ ವಿವಾದಕ್ಕೆ ಸಂಬಂಧಿಸಿದಂತೆ ಆಮ್ ಅದ್ಮಿ ಪಕ್ಷ ಜಂತರ್-ಮಂತರ್‌ನಲ್ಲಿ ಪ್ರತಿಭಟನೆ ನಡೆಸುವುದಾಗಿ ಘೋಷಿಸಿದೆ. ನಾಳೆ ಮೋದಿ ಸರ್ಕಾರವನ್ನು ಗುರಿಯಾಗಿರಿಸಿಕೊಂಡು ಎಎಪಿ ಸಂಸದರು, ಶಾಸಕರು ಕೌನ್ಸಿಲರ್‌ಗಳು, ಜಂತರ್-ಮಂತರ್‌ನಲ್ಲಿ ಪ್ರತಿಭಟನೆ ನಡೆಸಲು ನಿರ್ಧರಿಸಿದ್ದಾರೆ.

ಉಳಿದಂತೆ ರಾಜಸ್ತಾನ್ ಹೈಕೋರ್ಟ್ ಸಹ ಇಂದು ನೀಟ್ ಸಂಬಂಧಿತ ಅರ್ಜಿ ವಿಚಾರಣೆ ನಡೆಸಲಿದೆ. ಅಭ್ಯರ್ಥಿ ತನುಜಾ ಯಾಧವ್ ತಮ್ಮ ಪರೀಕ್ಷೆ ಪತ್ರಿಕೆಯನ್ನು 30 ನಿಮಿಷ ತಡವಾಗಿ ಸ್ವೀಕರಿಸಿದ್ದರು. ಉಳಿದ ಸಮಯದಲ್ಲಿ ಉತ್ತರವನ್ನು ಪೂರ್ಣಗೊಳಿಸಲು ಸಾಧ್ಯವಾಗಿರಲಿಲ್ಲ ಎಂದು ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಅವರಿಗೆ ಗ್ರೇಸ್ ಅಂಕಗಳನ್ನು ನೀಡಲಾಗಿರಲಿಲ್ಲ. ಈ ಹಿನ್ನೆಲೆಯಲ್ಲಿಗ್ರೇಸ್ ಅಂಕಗಳನ್ನು ನೀಡುವಂತೆ ಸುಪ್ರೀಂ ಮೆಟ್ಟಿಲೇರಿದ್ದರು.

## ಇನ್ನಷ್ಟು ನಟರಿಗೆ ಸಂಕಷ್ಟ

ಬೆಂಗಳೂರು:-



ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಬಂಧಿತ ನಟ ದರ್ಶನ್ ಜೊತೆ ಕೃತ್ಯ ನಡೆದ ದಿನ ಪಾರ್ಟಿ ಮಾಡಿದ್ದ ಹಾಸ್ಯನಟ ಚಿಕ್ಕಣ್ಣ ವಿಚಾರಣೆ ನಡೆಸಿರುವ ಪೊಲೀಸರು ಮತ್ತೊಬ್ಬ ನಟನಿಗೂ ವಿಚಾ ರಣೆ ಹಾಜರಾಗಲು ನೋಟಿಸ್ ನೀಡಿದ್ದಾರೆ. ನಟ ಯಶಸ್ ಸೂರ್ಯ ಕೂಡ ಕೃತ್ಯ ನಡೆದ ದಿನದಂದು ಸ್ಟೋನಿ ಬ್ರೂಕ್ ರೆಸ್ಟೋರೆಂಟ್‌ನಲ್ಲಿ ಡಿ ಗ್ಯಾಂಗ್ ಪಾರ್ಟಿಯಲ್ಲಿ ಭಾಗಿಯಾಗಿರುವುದು ಪತ್ತೆಯಾದ ಬೆನ್ನಲ್ಲೇ ನೋಟೀಸ್ ನೀಡಲಾಗಿದೆ. ಯಶಸ್ ಸೂರ್ಯ ನಟ ದರ್ಶನ್‌ಗೆ ಆಪ್ತನಾಗಿದ್ದು, ಅದೇ ದಿನ ನಡೆಸಲಾದ ಪಾರ್ಟಿಯಲ್ಲಿ ಚಿಕ್ಕಣ್ಣ ಜೊತೆ ಪಾಲ್ಗೊಂಡಿದ್ದರು,ಇದಲ್ಲದೆ ಅಂದು ಪಾರ್ಟಿಯಲ್ಲಿ ಭಾಗಿಯಾಗಿದ್ದ ಇನ್ನೂ ಕೆಲ ನಟರಿಗೂ ಪೊಲೀಸರು ನೋಟೀಸ್ ನೀಡುವ ಸಾಧ್ಯತೆ ಇದೆ. ಮುಖ್ಯವಾಗಿ, ಅಂ-ದು ದರ್ಶನ್ ಯಾರುಯಾರನ್ನು ಭೇಟಿಯಾಗಿದ್ದ-ರೋ ಅವರೆಲ್ಲರೂ ಪೊಲೀಸ್ ತನಿಖೆ -3ನೇ ಪುಟಕ್ಕೆ

## ತೈಲ ಬೆಲೆ ಏರಿಕೆ ವಿರುದ್ಧ ಜೂ. 20ಕ್ಕೆ ರಸ್ತೆ ತಡೆ : ಬಿವೈವಿ



ತುಮಕೂರು:-

ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮಾರಾಟ ತೆರಿಗೆಯನ್ನು ಹೆಚ್ಚಳ ಮಾಡಿರುವ ಸರ್ಕಾರದ ಕ್ರಮವನ್ನು ವಿರೋಧಿಸಿ ಭಾರತೀಯ ಜನತಾ ಪಾರ್ಟಿ ಜೂ. 20 ರಂದು ರಾಜ್ಯಾದ್ಯಂತ ರಸ್ತೆ ರೋ-ಖೋ ಚಳವಳಿ ನಡೆಸಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಇಂದಿಲ್ಲಿ ತಿಳಿಸಿದರು.

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ನಿನ್ನೆ ರಾಜ್ಯಾದ್ಯಂತ ಪ್ರತಿಭಟನೆ ನಡೆಸಿದ್ದೇವೆ. ರಾಜ್ಯದಲ್ಲಿ ಭಂಡ ಸರ್ಕಾರ ಅಧಿಕಾರದಲ್ಲಿದೆ. ಹಾಗಾಗಿ ಹೋರಾಟವನ್ನು ಮುಂದುವರೆಸುವ ಅನಿವಾರ್ಯತೆ ಇರುವುದರಿಂದ ಗುರುವಾರ ರಸ್ತೆ ರೋ-ಖೋ ಚಳವಳಿಯನ್ನು ರಾಜ್ಯಾದ್ಯಂತ ಹಮ್ಮಿಕೊಂಡಿದ್ದೇವೆ ಎಂದರು.

ನಗರದ ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಗದ್ದುಗೆ ದರ್ಶನ ಪಡೆದು ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿಯವರ ಆಶೀರ್ವಾದ ಪಡೆದ ನಂತರ ಸುದ್ದಿಗಾರರೊದಿಗೆ ಮಾತನಾಡಿದ ಅವರು, -3ನೇ ಪುಟಕ್ಕೆ

## ನಿರ್ಲಕ್ಷ್ಯ ಮಾಡಿದ್ದರೆ ತನಿಖೆ ಬೇರೆ ದಾರಿ
## ರೇಣುಕಾಸ್ವಾಮಿ ಹತ್ಯೆ



ಬೆಂಗಳೂರು:-

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಕೃತ್ಯದಲ್ಲಿ ಸ್ವಲ್ಪ ನಿರ್ಲಕ್ಷ್ಯವಹಿಸಿದ್ದರೆ ಪ್ರಕರಣ ಬೇರೆ ದಾರಿ ಹಿಡಿಯುತ್ತಿತ್ತು ಎಂದು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಅವರು ಸ್ಪಷ್ಟಪಡಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೆ ನಟ ದರ್ಶನ್ ಸೇರಿ 17 ಮಂದಿ ಆರೋಪಿಗಳನ್ನು ಬಂಧಿಸಿ ಎಲ್ಲಾ ಆಯಾಮಗಳಿಂದ ತನಿಖೆಯನ್ನು ನಡೆಸಲಾಗುತ್ತಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ರೇಣುಕಾಸ್ವಾಮಿ ಕೊಲೆ ಕೃತ್ಯವನ್ನು ಅತ್ಯಂತ ಜಾಗರೂಕತೆಯಿಂದ ತಂತ್ರಜ್ಞಾನ ಸೇರಿದಂತೆ ಸಾಕ್ಷ್ಯಾಧಾರಗಳನ್ನು ಆಧರಿಸಿ ಸಮರ್ಪಕ ರೀತಿಯಲ್ಲಿ ಪ್ರಕರಣದ ತನಿಖೆಯನ್ನು ಕೈಗೊಳ್ಳಲಾಗಿದೆ ಎಂದರು. ಪ್ರಕರಣವಯ ಗಂಭೀರ ಸ್ವರೂಪದಲ್ಲಿ ಇರುವುದರಿಂದ ಎಸಿಪಿಗೆ ತನಿಖಾ ಹೊಣೆ ನೀಡಿ ಅಗತ್ಯ ಸಿಬ್ಬಂದಿಗಳನ್ನು ಒದಗಿಸಿ ಬೆಂಗಳೂರು, ಚಿತ್ರದುರ್ಗ ಸೇರಿದಂತೆ ಹಲವು ಕಡೆ ತಂಡಗಳಿಂದ ತನಿಖೆ ನಡೆಯುತ್ತಿದೆ ಎಂದು ಹೇಳಿದರು. ನುರಿತ ಇನ್ಸ್‌ಪೆಕ್ಟರ್‌ಗಳು ತಂಡದಲ್ಲಿ ತನಿಖೆ ನಡೆಸುತಿದ್ದು, ಸಮರ್ಪಕ ಹಾಗೂ ವಿಧಿವಿಜ್ಞಾನ, ತಾಂತ್ರಿಕ, ಕಾನೂನು ಸಲಹೆ ಪಡೆದುಕೊಂಡು ತನಿಖೆ ನಡೆಸಲಾಗುತ್ತಿದೆ ತನಿಖೆಯ ವಿವರಗಳನ್ನು ನಾವು ಈಗಲೇ ಹೇಳಲು ಆಗುವುದಿಲ್ಲ ಎಂದರು.

## ದಲಿತ ಮಕ್ಕಳ ಶಿಕ್ಷಣ ನಿರ್ಲಕ್ಷ್ಯ: ಅಧಿಕಾರಿಗಳಿಗೆ ಸಿಎಂ ಚಾಟಿ



ಮುಖ್ಯಮಂತ್ರಿ ಸಿದ್ದರಾಮಯ್ಯರವರು ಇಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಿಎಂ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಶ್, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಎನ್. ಮಂಜುನಾಥ್ ಪ್ರಸಾದ್ ಇಲಾಖೆ ನಿರ್ದೇಶಕ ಕಲ್ಲೇಶ್, ಸಿಎಂ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದ ರಾಜು, ನಸೀರ್ ಅಹ್ಮದ್ ಇದ್ದಾರೆ.

ಬೆಂಗಳೂರು,ಜೂ.18:

ರಾಜ್ಯದ ವಸತಿ ಶಾಲೆಗಳಲ್ಲಿ ಓದುತ್ತಿರುವ ಬಡವರು, ದಲಿತ ಮಕ್ಕಳ ಶಿಕ್ಷಣದ ಬಗ್ಗೆ ನಿರ್ಲಕ್ಷ್ಯ ತಾಳಿರುವ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯರವರು, ರಾತ್ರಿ ವೇಳೆ ಆಶ್ರಮ ಶಾಲೆಗಳಿಗೆ ಭೇಟಿ ನೀಡಿ ಅಲ್ಲಿನ ವ್ಯವಸ್ಥೆಗಳನ್ನು ಗಮನಿಸದ ಅಧಿಕಾರಿಗಳ ವಿರುದ್ಧ ಗರಂ ಆದರು. ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯರವರು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಂದರ್ಭದಲ್ಲಿ ಆಶ್ರಮ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಗಮನ ನೀಡದ ಅಧಿಕಾರಿಗಳ ವಿರುದ್ಧ ಕಿಡಿ-ಕಾರಿ ನಿಯಮಿತವಾಗಿ ವಿದ್ಯಾರ್ಥಿನಿಲಯ, ಆಶ್ರಮ ಸಾಲೆಗಳಿಗೆ ನೀಡಬೇಕು ಎಂದು ತಾಕೀತು ಮಾಡಿದರು.

ಬಡವರು, ದಲಿತರು, ಆದಿವಾಸಿ, ಬುಡಕಟ್ಟು ಮಕ್ಕಳನ್ನು ಸರಿಯಾಗಿ ನೋಡಿಕೊಳ್ಳಲು ಆಗದಿದ್ದರೆ ನೀವು ಸೇವೆಯಲ್ಲಿರುವ ಲಾಯಕ್ಕಲ್ಲ ಎಂದು ಮುಖ್ಯಮಂತ್ರಿಗಳು ಅಧಿಕಾರಿಗಳ ವಿರುದ್ಧ ಸಭೆಯಲ್ಲಿ ಹರಿಹಾಯ್ದರು.

ರಾಜ್ಯಸರ್ಕಾರ ದಲಿತರು, ಬುಡಕಟ್ಟು, ಬಡವರ ಮಕ್ಕಳ ಶಿಕ್ಷಣಕ್ಕೆ ಹಾಗೂ ವಿದ್ಯಾರ್ಥಿ ನಿಲಯಗಳ -3ನೇ ಪುಟಕ್ಕೆ

## ಕೊಚ್ಚಿ: ಕಲುಷಿತ ನೀರು ಕುಡಿದು 25 ಮಕ್ಕಳು ಸೇರಿ 300 ಮಂದಿ ಅಸ್ವಸ್ಥ!

ಕೊಚ್ಚಿ:-

ಕೊಚ್ಚಿಯ ಕಾಕ್ಕನಾಡ್‌ನಲ್ಲಿರುವ 15 ಅಂತಸ್ತಿನ ವಸತಿ ಕಟ್ಟಡವೊಂದರಲ್ಲಿ ಕಲುಷಿತ ನೀರು ಸೇವಿಸಿ 25 ಮಕ್ಕಳು ಸೇರಿದಂತೆ 300 ಕ್ಕೂ ಹೆಚ್ಚು ನಿವಾಸಿಗಳು ಅಸ್ವಸ್ಥಗೊಂಡಿರುವ ಘಟನೆ ಮಂಗಳವಾರ ವರದಿಯಾಗಿದೆ.

ಕುಡಿಯುವ ನೀರಿನಲ್ಲಿ ಕೋಲಿ ಫಾರ್ಮ್ ಅಂಶ ಇರುವ ಶಂಕೆಯಿದ್ದು, ಇದರಿಂದ ಜನರು ಅಸ್ವಸ್ಥರಾಗಿರಬಹುದು ಎಂದು ಆರೋಗ್ಯಾಧಿಕಾರಿಗಳು ಹೇಳಿದ್ದಾರೆ.

ಅಪಾರ್ಟ್ ಮೆಂಟ್ ನಲ್ಲಿ ಸುಮಾರು 1,000 ಫ್ಲ್ಯಾಟ್ ಗಳಿದ್ದು, ಎಲ್ಲಾ ಫ್ಲ್ಯಾಟ್ ಗಳ ಮೇಲೂ ಪರಿಣಾಮ ಬೀರಿದೆ ಎಂದು ಸ್ಥಳೀಯ ನಿವಾಸಿಗಳು ಹೇಳಿದ್ದಾರೆ.

ಕಾಕ್ಕನಾಡು ಪುರಸಭಾ ಸದಸ್ಯ ಸಿ ಸಿ ವಿಜು ಮಾತನಾಡಿ, ಕುಡಿಯುವ ನೀರು ಕಲುಷಿತವಾಗಿರುವುದು ಘಟನೆಗೆ ಕಾರಣವೆಂದು ಶಂಕಿಸಲಾಗಿದೆ. ಇದೀಗ ನೀರಿನ ಮಾದರಿಯನ್ನು ಪರೀಕ್ಷೆಗೆ ಕಳುಹಿಸಲಾಗಿದ್ದು, ವರದಿಯ ನಂತರವಷ್ಟೇ ಸ್ಪಷ್ಟ ಮಾಹಿತಿ ಸಿಗುತ್ತದೆ ಎಂದು ಹೇಳಿದ್ದಾರೆ.

ಅಪಾರ್ಟ್ ಮೆಂಟ್ ಕೇರಳ ಜಲ ಪ್ರಾಧಿಕಾರದಿಂದ ಒಂದು ಸಂಪರ್ಕವನ್ನು ಮಾತ್ರ ಹೊಂದಿದ್ದು, ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿತ್ತು ಎಂದು ತಿಳಿಸಿದ್ದಾರೆ.


ಅಪಾರ್ಟ್‌ಮೆಂಟ್‌ಗೆ ಆರೋಗ್ಯಾಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಭೇಟಿ ನೀಡಿದ್ದು, ಪರಿಸ್ಥಿತಿ ಅವಲೋಕಿಸಿದ್ದಾರೆ ಎಂದು ಹೇಳಿದ್ದಾರೆ.

ಇನ್ಫೋಪಾರ್ಕ್‌ನಲ್ಲಿ ಕೆಲಸ ಮಾಡುತ್ತಿರುವ -3ನೇ ಪುಟಕ್ಕೆ

## 9.26 ಕೋಟಿ ರೈತರ ಖಾತೆಗೆ ಹಣ ವರ್ಗಾವಣೆ ಮೋದಿ ಚಾಲನೆ

ನವದೆಹಲಿ,ಜೂ.18-

ಪ್ರಧಾನಿ ನರೇಂದ್ರ ಮೋದಿ ಅವರು ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ಸ್ವೀಕಾರ ಮಾಡಿದ ಮೊದಲ ಕಡತಕ್ಕೆ ಸಹಿ ಹಾಕಿದ್ದ ಪಿಎಂ-ಕಿಸಾನ್ ಸಮ್ಮಾನ್ ನಿಧಿ ಅಡಿ ಸುಮಾರು 9.26 ಕೋಟಿ ಫಲಾನುಭವಿ ರೈತರಿಗೆ 20,000 ಕೋಟಿ ರೂ.ಗಿಂತ ಹೆಚ್ಚಿನ ಹಣ ವರ್ಗಾವಣೆಗೆ ಪ್ರಧಾನಿ ನರೇಂದ್ರ ಮೋದಿ ಇಂದು ಸಂಜೆ ಚಾಲನೆ ನೀಡಲಿದ್ದಾರೆ. ಉತ್ತರ ಪ್ರದೇಶದ ವಾರಣಸಿಯಲ್ಲಿ ಸಂಜೆ 5 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ರೈತರ ಖಾತೆಗೆ ನೇರ ಹಣ ಜಮೆ ಮಾಡುವ ಯೋಜನೆಗೆ ಚಾಲನೆ ನೀಡಲಿದ್ದು ಏಕ ಕಾಲದಲ್ಲಿ ಎಲ್ಲಾ ರಾಜ್ಯಗಳಲ್ಲಿ ಕೇಂದ್ರ ಸಚಿವರು ಆಯಾ ರಾಜ್ಯದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಮೂರನೇ ಅವಧಿಗೆ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಬಳಿಕ ಮೊದಲ ಅಧಿಕೃತ ಸರ್ಕಾರಿ ಕಾರ್ಯಕ್ರಮ ಇದಾಗಿದ್ದು ರೈತರ ಕಲ್ಯಾಣಕ್ಕಾಗಿ ಸರ್ಕಾರದ ಬದ್ಧತೆ ಇದೆ ಎನ್ನುವುವನ್ನು ನಿರೂಪಿಸಿದ್ದಾರೆ.



ಇಲ್ಲಿಯವರೆಗೆ, 11 ಕೋಟಿಗೂ ಹೆಚ್ಚು ಅರ್ಹ ರೈತ ಕುಟುಂಬಗಳು ರೂ.ಗಿಂತ ಹೆಚ್ಚಿನ ಪ್ರಯೋಜನಗಳನ್ನು ಪಡೆದಿವೆ. ಪಿಎಂ-ಕಿಸಾನ್ ಅಡಿಯಲ್ಲಿ 3.04 ಲಕ್ಷ ಕೋಟಿ ರೈತರು ಲಾಭ ಪಡೆದಿದ್ದಾರೆ.ಈ ಸಂದರ್ಭದಲ್ಲಿ ಪ್ರಧಾನಮಂತ್ರಿಯವರು ಸ್ವ-ಸಹಾಯ ಗುಂಪುಗಳ ಕೃಷಿ ಸಖಿಗಳ 30,000 ಕ್ಕೂ ಹೆಚ್ಚು ಮಹಿಳೆಯರಿಗೆ ಪ್ರಮಾಣಪತ್ರಗಳನ್ನು ನೀಡಲಿದ್ದಾರೆ. ಕೃಷಿ ಸಖಿ ಕನ್ವರ್ಜೆನ್ಸ್ ಪ್ರೋಗ್ರಾಂ -3ನೇ ಪುಟಕ್ಕೆ

## ಮೃತ ರೇಣುಕಾಸ್ವಾಮಿ ಕುಟುಂಬಕ್ಕೆ ಸಾಂತ್ವನ ಹೇಳಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ



ಚಿತ್ರದುರ್ಗ:-

ಚಿತ್ರದುರ್ಗದ ವಿಆರ್‌ಎಸ್ ಬಡಾವಣೆಯ ರೇಣುಕಾಸ್ವಾಮಿ ನಿವಾಸಕ್ಕೆ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಮಂಗಳವಾರ ಭೇಟಿ ನೀಡಿದ್ದು, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ರೇಣುಕಾಸ್ವಾಮಿ ನಿವಾಸಕ್ಕೆ ಭೇಟಿ ನೀಡಿರುವ ಕುರಿತು ವಿಜಯೇಂದ್ರ ಅವರು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

ಚಿತ್ರದುರ್ಗದಲ್ಲಿಂದು ಇತ್ತೀಚೆಗಷ್ಟೇ ಹತ್ಯೆಗೀಡಾದ ರೇಣುಕಾ ಸ್ವಾಮಿ ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಲಾಯಿತು. ಇನ್ನೂ ಪ್ರಪಂಚವನ್ನೇ ಕಾಣದ ಕಂದಮ್ಮನನ್ನು ಹೊತ್ತುಕೊಂಡಿರುವ ಹಾಗೂ ತನ್ನ ಸುಂದರ ಬದುಕನ್ನು ಕಳೆದುಕೊಂಡು ಅನಾಥ ಪ್ರಜ್ಞೆ ಎದುರಿಸುತ್ತಿರುವ ರೇಣುಕಾಸ್ವಾಮಿ ಪತ್ನಿ ಹಾಗೂ ಅವರ -3ನೇ ಪುಟಕ್ಕೆ

ಒಂದನೇ ಪುಟದಿಂದ

# ಇನ್ನಷ್ಟು ನಟರಿಗೆ ಸಂಕಷ್ಟ

ಎದುರಿಸಬೇಕಿದೆ. ಅಂದು ನಡೆಸಿದ ಮಾತುಕತೆಯನ್ನು ದರ್ಶನ್, ರೇಣುಕಾಸ್ವಾಮಿ ವಿಚಾರ ಎತ್ತಿದ್ದರೇ ಎಂಬುದು ತನಿಖೆಯ ಮುಖ್ಯ ವಿಚಾರವಾಗಿರಲಿದೆ.

**27 ಮಂದಿ ವಿಚಾರಣೆ:**

ದರ್ಶನ್ ಗ್ಯಾಂಗ್‌ನಿಂದ ನಡೆದ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಬಂಧಿತರಲ್ಲದೇ ಹಲವು ಮಂದಿಯನ್ನು ಪೊಲೀಸರು ವಿಚಾರಣೆಗೊಳಪಡಿಸಿದ್ದು, ಅವರ ಹೇಳಿಕೆಗಳನ್ನು ದಾಖಲಿಸಿದ್ದಾರೆ. ಹೇಳಿಕೆ ನೀಡಿದವರನ್ನು ಸಾಕ್ಷಿಗಳಾಗಿ ಪರಿಗಣಿಸಲಾಗಿದೆ.

ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಆರೋಪಿಗಳು ಸೇರಿ 27ಕ್ಕೂ ಹೆಚ್ಚು ಮಂದಿಯ ವಿಚಾರಣೆ ನಡೆಸಲಾಗಿದೆ. 27 ಮಂದಿಯಲ್ಲಿ 17 ಮಂದಿ ಬಂಧಿತ ಆರೋಪಿಗಳು. ನಟ ದರ್ಶನ್, ಪವಿತ್ರ ಗೌಡ ಸೇರಿ 17 ಮಂದಿ ಬಂಧಿತ ಆರೋಪಿಗಳು. ಇನ್ನುಳಿದ 10 ಮಂದಿಯನ್ನು ಸಾಕ್ಷಿಗಳಾಗಿ ಪರಿಗಣಿಸಲಾಗಿದೆ. ಸಾಕ್ಷಿಗಳು ಎಂದು ಈವರೆಗೆ 10 ಮಂದಿಯ ಹೇಳಿಕೆಯನ್ನು ಪೊಲೀಸರು ದಾಖಲಿಸಿದ್ದಾರೆ.

**ಹೇಳಿಕೆ ದಾಖಲು:**

ಘಟನಾ ಸ್ಥಳದಲ್ಲಿ ಹಾಜರಿದ್ದ ಕೆಲವರು, ಬೇರೆಬೇರೆ ಕಡೆಗಳಲ್ಲಿ ಪ್ರತ್ಯಕ್ಷ ಪರೋಕ್ಷವಾಗಿ ಕಂಡು ಬಂದ ವ್ಯಕ್ತಿಗಳ ವಿಚಾರಣೆ ನಡೆಸಲಾಗಿದೆ. ಅವರನ್ನು ರೇಣುಕಾಸ್ವಾಮಿ ಕೊಲೆ ಸಂಬಂಧ ಸಾಕ್ಷಿಗಳು ಎಂದು ಪರಿಗಣಿಸಿ ಹೇಳಿಕೆ ದಾಖಲು ಮಾಡಲಾಗಿದೆ. ಶೆಡ್ ಬಳಿ ಇದ್ದ ಇನ್ನೂ ಕೆಲವರ ಹೇಳಿಕೆ ಪಡೆದುಕೊಂಡಿದ್ದಾರೆ. ಘಟನೆ ಹೇಗಾಯ್ತು, ಯಾರು ಯಾರು ಇದ್ದರು, ಎಷ್ಟು ಜನ ಸೇರಿದ್ದರು, ದರ್ಶನ್ ಎಷ್ಟು ಹೊತ್ತಿಗೆ ಬಂದಿದ್ದು, ಯಾವಯಾವ ಆಯುಧಗಳಿಂದ ಹಲ್ಲೆ ಮಾಡಿದರು, ಹೀಗೆ ಹಲವು ವಿಚಾರಗಳ ಬಗ್ಗೆ ಹೇಳಿಕೆ ದಾಖಲಿಸಿದ್ದಾರೆ. ಶೆಡ್‌ನ ಸಿಸಿ ಕ್ಯಾಮೆರಾ ಫೂಟೇಜ್‌ಗಳನ್ನು ದರ್ಶನ್ ಗ್ಯಾಂಗ್ ನಾಶ ಮಾಡಿರುವ ಹಿನ್ನೆಲೆಯಲ್ಲಿ, ಈ ಪ್ರತ್ಯಕ್ಷ ಸಾಕ್ಷಿಗಳ ಹೇಳಿಕೆ ಮಹತ್ವ ಪಡೆದುಕೊಳ್ಳಲಿದೆ.

**3 ಗಂಟೆ ಪೊಲೀಸ್ ಡ್ರಿಲ್:**

ನಟ ದರ್ಶನ್ ಜೊತೆ ಕೊಲೆಯ ದಿನ ಪಾರ್ಟಿ ಮಾಡಿದ್ದ ಹಾಸ್ಯನಟ ಚಿಕ್ಕಣ್ಣ ಅವರನ್ನು ನಿನ್ನೆ ಮೂರು ಗಂಟೆಗಳ ಕಾಲ ಪೊಲೀಸರು ನಡೆಸಿದ ವಿಚಾರಣೆಯಲ್ಲಿ,ನಾನು ದರ್ಶನ್ ಜೊತೆ ಪಾರ್ಟಿ ಮಾಡಿದ್ದು ನಿಜ ಎಂದು ಒಪ್ಪಿಕೊಂಡಿದ್ದಾರೆ.

ಜೂ.8 ರಂದು ಸ್ಟೋನಿ ಬ್ರೋಕ್ ಪಬ್‌ಗೆ ನಾನು ಮಧ್ಯಾಹ್ನ 1.30ರ ಸುಮಾರಿಗೆ ಪಬ್‌ಗೆ ಬಂದಿದ್ದು, ದರ್ಶನ್ ಮತ್ತು ನಾನು ಒಂದೇ ಟೇಬಲ್ ನಲ್ಲಿ ಪಾರ್ಟಿ ಮಾಡಿದೆವು. ಸುಮಾರು 4:30ರ ಹೊತ್ತಿಗೆ ಅವರು ಹೊರಟರು.

ಅವರ ಜೊತೆಗೆ ನಾನೂ ಅಲ್ಲಿಂದ ಹೊರಟು ನನ್ನ ಮನೆಗೆ ಹೋದೆ, ದರ್ಶನ್ ಎಲ್ಲಿಗೆ ಹೋದರೋ ನನಗೆ ಗೊತ್ತಿಲ್ಲ" ಎಂದು ಚಿಕ್ಕಣ್ಣ ಹೇಳಿದ್ದಾರೆ.

ವಕೀಲರ ಜೊತೆ ವಿಚಾರಣೆಗೆ ಹಾಜರಾದ ನಟ ಚಿಕ್ಕಣ್ಣ ಅವರ ಬಳಿ ಪೊಲೀಸರು ನೂರಾರು ಪ್ರಶ್ನೆಗಳನ್ನು ಹಾಕಿ ವಿಷಯ ಸಂಗ್ರಹಿಸಿದರು.

ಮಧ್ಯಾಹ್ನ 1.30ರಿಂದ 4.30ರವರೆಗೆ ಏನೆಲ್ಲಾ ಆಯ್ತು ಮತ್ತೋರ್ವ ನಟ ಹಾಗೂ ನಿರ್ಮಾಪಕ ಇದ್ದರಾ ಯಾವ ಸಿನಿಮಾ ವಿಚಾರಕ್ಕೆ ಮಾತು ಕತೆ ನಡೀತಿತ್ತು ಬರೀ ಸಿನಿಮಾ ವಿಚಾರವಾ ಅಥವಾ ಬೇರೆ ಏನಾದ್ರೂ ಮಾತು ಕತೆ ನಡೆದಿತ್ತಾ ಅವತ್ತು ದರ್ಶನ್ ವರ್ತನೆ ಹೇಗಿತ್ತು ರೇಣುಕಾಸ್ವಾಮಿ ಬಗ್ಗೆ ಅವತ್ತು ಚರ್ಚೆ ಏನಾದರೂ ಆಗಿತ್ತಾ ಹೀಗೆ ಹಲವು ಪ್ರಶ್ನೆಗಳಿಗೆ ಹೇಳಿಕೆ ದಾಖಲಿಸಿದ್ದಾರೆ.

ನನ್ನನ್ನು ಕೇಳಿ ದರ್ಶನ್ ಶೆಡ್‌ಗೆ ಹೋಗಿಲ್ಲ

ತಮಗೆ ಮಾಹಿತಿ ನೀಡಿ ನಟ ದರ್ಶನ್ ಶೆಡ್‌ಗೆ ಹೋಗಿಲ್ಲ ಎಂದು ರೇಣುಕಾಸ್ವಾಮಿಗೆ ಚಿತ್ರಹಿಂಸೆ ನೀಡಿ ಹತ್ಯೆ ಮಾಡಿದ ಶೆಡ್‌ನ ಮಾಲೀಕ ಪಟ್ಟಣಗೆರೆ ಜಯಣ್ಣ ಸ್ಪಷ್ಟಪಡಿಸಿದ್ದಾರೆ.

ತಮ್ಮ ಒಡೆತನದಲ್ಲಿರುವ ಶೆಡ್‌ನ್ನು ಬಾಡಿಗೆಗೆ ನೀಡಿದ್ದೇನೆ. ಕಿಶೋರ್ ಅವರು ಬಾಡಿಗೆದಾರರಾಗಿದ್ದಾರೆ. ಶೆಡ್‌ನ ಕೀ ಅವರ ಬಳಿ ಇರುತ್ತದೆ. ನಮಗೂ ಅದಕ್ಕೂ ಸಂಬಂಧವಿಲ್ಲ ಎಂದು ವಿಚಾರಣೆ ಸಂದರ್ಭದಲ್ಲಿ ಆಸ್ತಿ ಬಗ್ಗೆ ಮಾತ್ರ ಪೊಲೀಸರು ಪ್ರಶ್ನೆ ಮಾಡಿದ್ದಾರೆ ಎಂದು ಅವರು ಸ್ಪಷ್ಟಪಡಿಸಿದರು.

# ತೈಲ ಬೆಲೆ ಏರಿಕೆ ವಿರುದ್ಧ ಜೂ. 20ಕ್ಕೆ ರಸ್ತೆ ತಡೆ : ಬಿವೈವಿ

ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರವನ್ನು ದೂರುತ್ತಾ ತಮ್ಮ ಸರ್ಕಾರದ ಹುಳುಕನ್ನು ಮುಚ್ಚಿಕೊಳ್ಳುವ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಒಂದು ವರ್ಷದಲ್ಲಿ ಹಾಲಿನ ದರ, ವಿದ್ಯುತ್ ದರ, ಅಬಕಾರಿ ಸುಂಕ, ಮುದ್ರಾಂಕ ಶುಲ್ಕ ಸೇರಿದಂತೆ ಇನ್ನಿತರೆ ಶುಲ್ಕಗಳನ್ನು ಏರಿಕೆ ಮಾಡಿದೆ. ಇಷ್ಟೆಲ್ಲಾ ತೆರಿಗೆ ಜಾಸ್ತಿ ಮಾಡಿ ಸರ್ಕಾರದ ಆದಾಯವನ್ನು ವೃದ್ಧಿಕೊಂಡಿದೆ. ಈ ಹಣವೆಲ್ಲಾ ಎಲ್ಲಿಗೆ ಹೋಗುತ್ತಿದೆ ಎಂದು ಅವರು ಪ್ರಶ್ನಿಸಿದರು.

ಭ್ರಷ್ಟಾಚಾರದ ಬಗ್ಗೆ ಮುಖ್ಯಮಂತ್ರಿಗಳು ಮಾತನಾಡುತ್ತಾರೆ. ವಾಲ್ಮೀಕಿ ನಿಗಮದಲ್ಲಿ ನೂರಾರು ಕೋಟಿ ಹಣ ಬೇನಾಮಿ ಖಾತೆ ಮುಖಾಂತರ ಆಂಧ್ರಕ್ಕೆ ಹೋಗಿದೆ. ಆಂಧ್ರ ಚುನಾವಣೆಯಲ್ಲಿ ಆ ಹಣ ಬಳಕೆಯಾಗಿದೆ. ಇಷ್ಟೆಲ್ಲಾ ಭ್ರಷ್ಟಾಚಾರ ನಡೆದಿದ್ದರೂ ಹಣಕಾಸು ಮಂತ್ರಿಯಾಗಿರುವ ಮುಖ್ಯಮಂತ್ರಿಗಳಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇದೆಯೇ ಎಂದು ಖಾರವಾಗಿ ಪ್ರಶ್ನಿಸಿದರು.

ಪದೇ ಪದೇ ಎಲ್ಲದಕ್ಕೂ ಕೇಂದ್ರ ಸರ್ಕಾರವನ್ನು ದೂಷಿಸುತ್ತೀರಿ, ನಾವು ಪ್ರತಿಭಟನೆ ಮಾಡಿದರೆ ನಮ್ಮ ಮೇಲೆ ಭ್ರಷ್ಟಾಚಾರದ ಆರೋಪ ಮಾಡುತ್ತೀರಿ, ಎಂದು ವಿಜಯೇಂದ್ರ ಮುಖ್ಯಮಂತ್ರಿಗಳ ವಿರುದ್ಧ ಹರಿಹಾಯ್ದರು.

ಪೆಟ್ರೋಲ್, ಡೀಸೆಲ್ ದರ ಹೆಚ್ಚಳದಿಂದ ರೈತರಿಗೆ, ಜನಸಾಮಾನ್ಯರಿಗೆ ಅನ್ಯಾಯವಾಗುತ್ತಿದೆ. ಮುಖ್ಯಮಂತ್ರಿಗಳು ಇದನ್ನು ಗಮನಿಸಬೇಕು ಎಂದು ಅವರು ಹೇಳಿದರು.

ರಾಜ್ಯದಲ್ಲಿ ರೈತರು ಸಂಕಷ್ಟದಲ್ಲಿದ್ದಾರೆ. ಮುಖ್ಯಮಂತ್ರಿಗಳು ಉಡಾಫೆ ಉತ್ತರ ಕೊಡುವುದನ್ನು ಬಿಟ್ಟು ತೈಲ ಬೆಲೆ ಇಳಿಕೆ ಮಾಡುವತ್ತ ಗಮನ ಹರಿಸಬೇಕು. ಈ ಹಿಂದೆ ಬಸವರಾಜು ಬೊಮ್ಮಾಯಿ ಅವರು ಮುಖ್ಯಮಂತ್ರಿಗಳಾಗಿದ್ದಾಗ ತೈಲ ಬೆಲೆಯಲ್ಲಿ 7 ರೂಪಾಯಿ ಕಡಿಮೆ ಮಾಡಲಾಗಿತ್ತು ಎಂದರು.

ರಾಜ್ಯ ಸರ್ಕಾರ ಎಡವುತ್ತಿರುವ ಪ್ರಸ್ತುತ ಸಂದರ್ಭದಲ್ಲಿ ವಿರೋಧ ಪಕ್ಷವಾಗಿ ನಾವು ನಮ್ಮ ಕೆಲಸವನ್ನು ಸಮರ್ಥವಾಗಿ ಮಾಡುತ್ತಿದ್ದೇವೆ ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಈಗ ಉತ್ತಮ ಮಳೆಯಾಗುತ್ತಿದೆ. ರೈತರು ಟ್ರ್ಯಾಕ್ಟರ್, ಟಿಲ್ಲರ್, ಪಂಪ್‌ಸೆಟ್‌ಗಳನ್ನು ಉಪಯೋಗಿಸುತ್ತಿದ್ದಾರೆ.

ಪೆಟ್ರೋಲ್, ಡೀಸೆಲ್ ಲೀಟರ್‌ಗೆ ಮೂರುವರೆ ರೂಪಾಯಿ ಜಾಸ್ತಿ ಮಾಡಿದರೆ ಅದರ ಹೊರೆ ರೈತರ ಮೇಲೆ ಬೀಳೋದಿಲ್ಲವ್ವಾ, ಜನಸಾಮಾನ್ಯರ ಮೇಲೆ ಹೊರೆಯಾಗುವುದಿಲ್ಲವ್ವಾ. ಈ ಬಗ್ಗೆ ನೀವುಗಳೇ ಆತ್ಮಾವಲೋಕನ ಮಾಡಿಕೊಳ್ಳಿ ಎಂದರು.

ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಏನೂ ಅಭಿವೃದ್ಧಿಯಾಗಿಲ್ಲ. ಯಾವುದೇ ಕ್ಷೇತ್ರದ ಅಭಿವೃದ್ಧಿಗೆ ಅನುದಾನ ನೀಡಿಲ್ಲ.

ಅಭಿವೃದ್ಧಿ ಮಾಡಲು ಕೇಂದ್ರ ಸರ್ಕಾರದಿಂದ ಹಣ ಬಂದಿಲ್ಲ ಎನ್ನುತ್ತೀರಾ, ನಿಮ್ಮ ಆದಾಯವನ್ನು ಏನುಮಾಡುತ್ತಿದ್ದೀರಾ, ಬಿಜೆಪಿ ಸರ್ಕಾರ ಅಧಿಕಾರದಿಂದ ಕೆಳಗಿಳಿಯುವ ಸಂದರ್ಭದಲ್ಲಿ ರಾಜ್ಯದ ಆದಾಯ ಅಧಿಕವಿತ್ತು. ಆದಾಯ ಹೆಚ್ಚಳವಿದ್ದ ಕರ್ನಾಟಕದಲ್ಲಿ ಕಳೆದ ಒಂದು ವರ್ಷದಲ್ಲಿ ಯಾವ ರೀತಿ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಅತಿ ಹೆಚ್ಚು ಬಜೆಟ್ ಮಂಡಿಸಿರುವ ಅನುಭವಿ ಮುಖ್ಯಮಂತ್ರಿಯಾಗಿದ್ದರೂ ಸಹ ಆದರೂ ರಾಜ್ಯದ ಹಣಕಾಸು ಪರಿಸ್ಥಿತಿಯನ್ನು ಅಧೋಗತಿಗೆ ತಂದಿದ್ದಾರೆ ಎಂದು ಆರೋಪಿಸಿದರು.

ಮುಖ್ಯಮಂತ್ರಿಗಳು ಎಚ್ಚೆತ್ತುಕೊಂಡು ಜನಸಾಮಾನ್ಯರಿಗೆ ಹೊರೆ ಮಾಡುತ್ತಿರುವ ನಿರ್ಧಾರದಿಂದ ಹಿಂದೆ ಸರಿಯಬೇಕು.

ಗುರುವಾರ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ಸೇರಿ ನಾವೆಲ್ಲರೂ ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಶಾಸಕರಾದ ಸುರೇಶ್‌ಗೌಡ, ಜ್ಯೋತಿಗಣೇಶ್, ರಾಮಮೂರ್ತಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ರವಿಶಂಕರ್ ಹೆಬ್ಬಾಕ, ಎಸ್. ಶಿವಪ್ರಸಾದ್, ಡಾ. ಪರಮೇಶ್, ಸ್ಫೂರ್ತಿ ಚಿದಾನಂದ್, ಬ್ಯಾಟ–ರಂಗೇಗೌಡ, ರುದ್ರೇಶ್, ಗ್ಯಾಸ್ ಚಂದ್ರಶೇಖರಬಾಬು ಮತ್ತಿತರರು ಉಪಸ್ಥಿತರಿದ್ದರು.

# ಕೊಚ್ಚಿ: ಕಲುಷಿತ ನೀರು ಕುಡಿದು 25 ಮಕ್ಕಳು ಸೇರಿ 300 ಮಂದಿ ಅಸ್ವಸ್ಥ!

ನಿವಾಸಿ ನಿಕಿತಾ ಜಾಯ್ ಎಂಬುವವರು ಮಾತನಾಡಿ, ನಿನ್ನೆಯಿಂದ ವಾಂತಿ ಭೇದಿಯಿಂದ ಬಳಲುತ್ತಿದ್ದೇನೆ, ಇ–ಕೋಲಿ ಬ್ಯಾಕ್ಟೀರಿಯಾದಿಂದ ಸೋಂಕು ಉಂಟಾಗಿದೆ ಎಂದು ಹೇಳಲಾಗುತ್ತಿದೆ ಎಂದು ಹೇಳಿದ್ದಾರೆ.

ನೀರಿನ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸುವ ಮತ್ತು ಸೋಂಕು ನಿವಾರಣಾ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳುತ್ತಿದ್ದಾರೆ.

ಆರೋಗ್ಯ ತಪಾಸಣೆ ಮತ್ತು ಔಷಧಿಗಳನ್ನು ಶಿಫಾರಸು ಮಾಡಲು ವೈದ್ಯರು ಮತ್ತು ಆರೋಗ್ಯ ಕಾರ್ಯಕರ್ತರ ತಂಡವು ಸ್ಥಳಕ್ಕೆ ಬರಲಿದ್ದಾರೆಂದೂ ಮಾಹಿತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಪುರಸಭೆಯ ಅಧಿಕಾರಿಗಳು ಮಾತನಾಡಿ, ಏಕಾಏಕಿ ಮಳೆಯಿಂದಾಗಿ ನೀರು ಕಲುಷಿತಗೊಂಡಿರುವ ಸಾಧ್ಯತೆಗಳಿವೆ. ಆದರೆ, ನಿಖರ ಕಾರಣಗಳು ಸಂಪೂರ್ಣ ತನಿಖೆಯ ನಂತರವೇ ತಿಳಿದುಬರಲಿದೆ ಎಂದು ಹೇಳಿದ್ದಾರೆ.

ಏತನ್ಮಧ್ಯೆ, ಜಿಲ್ಲಾ ವೈದ್ಯಾಧಿಕಾರಿ ಡಾ.ಸಕೀನಾ ಮಾತನಾಡಿ, ಇ–ಕೋಲಿ ಅಥವಾ ಬ್ಯಾಕ್ಟೀರಿಯಾದಿಂದ ಜನರು ಅಸ್ವಸ್ಥಗೊಂಡಿದ್ದಾರೆ.

ನೀರಿನ ಮಾದರಿಯನ್ನು ಪರೀಕ್ಷೆಗೆ ಕಳುಹಿಸಲಾಗಿದ್ದು, ವರದಿ ಬಂದ ನಂತರವೇ ಸ್ಪಷ್ಟ ಚಿತ್ರಣ ಸಿಗಲಿದೆ. ನೀರಿನಲ್ಲಿ ಇತರ ಸೂಕ್ಷ್ಮಜೀವಿಗಳ ಉಪಸ್ಥಿತಿ ಇದೆಯೇ ಎಂದು ನಾವು ಪರಿಶೀಲಿಸುತ್ತಿದ್ದೇವೆ. ಆದಾಗ್ಯೂ, ನೀರಿನಿಂದ ಹರಡುವ ಸೋಂಕಿನಿದಲೇ ಜನರು ಅಸ್ವಸ್ಥಗೊಂಡಿದ್ದಾರೆಂದು ದೃಢಪಡಿಸಿದ್ದಾರೆ.

# ಮೃತ ರೇಣುಕಾಸ್ವಾಮಿ ಕುಟುಂಬಕ್ಕೆ ಸಾಂತ್ವನ ಹೇಳಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ

ತಂದೆ–ತಾಯಿಯರಿಗೆ ಚಿತ್ರದುರ್ಗದಲ್ಲಿಂದು ಇತ್ತೀಚೆಗಷ್ಟೇ ಹತ್ಯೆಗೀಡಾದ ರೇಣುಕಾ ಸ್ವಾಮಿ ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಲಾಯಿತು. ಇನ್ನೂ ಪ್ರಪಂಚವನ್ನೇ ಕಾಣದ ಕಂದಮ್ಮನನ್ನು ಹೊತ್ತುಕೊಂಡಿರುವ ಹಾಗೂ ತನ್ನ ಸುಂದರ ಬದುಕನ್ನು ಕಳೆದುಕೊಂಡು ಅನಾಥ ಪ್ರಜ್ಞೆ ಎದುರಿಸುತ್ತಿರುವ ರೇಣುಕಾಸ್ವಾಮಿ ಪತ್ನಿ ಹಾಗೂ ಅವರ ತಂದೆ–ತಾಯಿಯರಿಗೆ ಧೈರ್ಯಗೆಡದಂತೆ ನೈತಿಕ ಸ್ಥೈರ್ಯ ತುಂಬಲಾಯಿತು.

ನಾಗರಿಕ ಸಮಾಜದಲ್ಲಿ ಬದುಕುವ ಪ್ರತಿಯೊಬ್ಬರೂ ಅತ್ಯುಗ್ರವಾಗಿ ಖಂಡಿಸುವ ಘಟನೆ ಇದಾಗಿದ್ದು, ಸಾಮಾಜಿಕ ಜಾಲತಾಣ ಮಾಹಿತಿ ಹಾಗೂ ಪರಸ್ಪರ ಸ್ನೇಹ ಬೆಸೆಯುವ ತಾಣವಾಗಬೇಕು ಆದರೆ ದ್ವೇಷ, ಕೊಲೆ, ವಿಕೃತ ಹರಡುವ ಮಟ್ಟಕ್ಕೆ ವಿಸ್ತಾರಗೊಳ್ಳುತ್ತಿರುವುದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಹೇಳಿದ್ದಾರೆ.

ಪ್ರಕರಣದ ತನಿಖೆ ನ್ಯಾಯಯುತವಾದ ಮಾರ್ಗದಲ್ಲಿ ನಡೆಯುತ್ತಿದೆ ಎಂದು ನಂಬಿದ್ದೇನೆ, ಆರೋಪ ಪಟ್ಟಿ ಸಲ್ಲಿಸುವವರೆಗೂ ಯಾವ ಹಸ್ತಕ್ಷೇಪಕ್ಕೂ ಪೊಲೀಸರು ಮಣಿಯಬಾರದು, ರೇಣುಕಾ ಸ್ವಾಮಿ ಕೊಲೆಗೆ ನ್ಯಾಯ ಸಿಗಲೇಬೇಕು, ತಪ್ಪಿತಸ್ಥರು ಎಷ್ಟೇ ದೊಡ್ಡವರಿದ್ದರೂ ಅವರಿಗೆ ಶಿಕ್ಷೆ ಆಗಲೇಬೇಕು ಎಂದು ಆಗ್ರಹಿಸಿದ್ದಾರೆ.

ರೇಣುಕಾಸ್ವಾಮಿ ನಿವಾಸಕ್ಕೆ ವಿಜಯೇಂದ್ರ ಅವರು ಭೇಟಿ ನೀಡಿದ ಸಂದರ್ಭದಲ್ಲಿ ಸಂಸದರಾದ ಗೋವಿಂದ ಕಾರಜೋಳ ಶಾಸಕ ಚಂದ್ರಪ್ಪ, ಮಾಜಿ ಶಾಸಕ ತಿಪ್ಪಾರೆಡ್ಡಿ, ವಿಧಾನ ಪರಿಷತ್ ಸದಸ್ಯ ಶ್ರೀ ಕೆ.ಎಸ್.ನವೀನ್, ಬಿಜೆಪಿ ಮುಖಂಡ ಎಸ್.ಲಿಂಗಮೂರ್ತಿ, ಜಿಲ್ಲಾಧ್ಯಕ್ಷ ಶ್ರೀ ಮುರುಳಿ, ಹನುಮಂತೇಗೌಡ ಸೇರಿದಂತೆ ಪಕ್ಷದ ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# 9.26 ಕೋಟಿ ರೈತರ ಖಾತೆಗೆ ಹಣ ವರ್ಗಾವಣೆ ಮೋದಿ ಚಾಲನೆ

ಗ್ರಾಮೀಣ ಮಹಿಳೆಯರನ್ನು ಕೃಷಿ ಸಖಿಯಾಗಿ ಸಬಲೀಕರಣಗೊಳಿಸುವ ಮೂಲಕ ಗ್ರಾಮೀಣ ಭಾರತವನ್ನು ಪರಿವರ್ತಿಸುವ ಗುರಿ ಹೊಂದಿದೆ.

ಸಂಜೆ ಗಂಗಾರತಿ ಸಂಜೆ 7 ಗಂಟೆಗೆ ಪ್ರಧಾನಿ ಮೋದಿ ಅವರು ದಶಾಶ್ವಮೇಧ ಘಾಟ್‌ನಲ್ಲಿ ಗಂಗಾ ಆರತಿಯನ್ನು ವೀಕ್ಷಿಸಲಿದ್ದಾರೆ ಮತ್ತು ನಂತರ ರಾತ್ರಿ 8 ಗಂಟೆಗೆ ಕಾಶಿ ವಿಶ್ವನಾಥ ದೇವಸ್ಥಾನದಲ್ಲಿ ಪೂಜೆ ಮತ್ತು ದರ್ಶನವನ್ನು ಮಾಡಲಿದ್ದಾರೆ.

**ಬಿಹಾರಕ್ಕೆ ನಾಳೆ ಭೇಟಿ:**

ಬಿಹಾರದಲ್ಲಿ ಬೆಳಗ್ಗೆ 9.45ರ ಸುಮಾರಿಗೆ ಪ್ರಧಾನಿ ನರೇಂದ್ರ ಮೋದಿ ಅವರು ನಳಂದದ ಅವಶೇಷಗಳಿಗೆ ಭೇಟಿ ನೀಡಲಿದ್ದಾರೆ.

ನಳಂದದ ಅವಶೇಷಗಳನ್ನು 2016 ರಲ್ಲಿ ವಿಶ್ವ ಪಾರಂಪರಿಕ ತಾಣ ಎಂದು ಎಂದು ಘೋಷಿಸಲಾಗಿದೆ.ಬೆಳಗ್ಗೆ 10.30ರ ಸುಮಾರಿಗೆ ರಾಜ್‌ಗಿನಲ್ಲಿ ನಳಂದ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್ ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ವಿಶ್ವವಿದ್ಯಾನಿಲಯವನ್ನು ಭಾರತ ಮತ್ತು ಪೂರ್ವ ಏಷ್ಯಾ ಶೃಂಗಸಭೆ ದೇಶಗಳ ನಡುವಿನ ಸಹಯೋಗವಾಗಿ ಕಲ್ಪಿಸಲಾಗಿದೆ.

ಉದ್ಘಾಟನಾ ಸಮಾರಂಭದಲ್ಲಿ 17 ದೇಶಗಳ ಮಿಷನ್ ಮುಖ್ಯಸ್ಥರು ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ.

# ದಲಿತ ಮಕ್ಕಳ ಶಿಕ್ಷಣ ನಿರ್ಲಕ್ಷ್ಯ: ಅಧಿಕಾರಿಗಳಿಗೆ ಸಿಎಂ ಚಾಟಿ

ಒದಗಿಸಲು ಇಷ್ಟೆಲ್ಲ ಹಣ ಸವಲತ್ತು ಕೊಡುತ್ತಿದ್ದರೂ ಮಕ್ಕಳ ಶೈಕ್ಷಣಿಕ ಮಟ್ಟ ಏರಿಕೆಯಾಗುತ್ತಿಲ್ಲ ಎಂದು ಗರಂ ಆಗಿ ಈ ಬಗ್ಗೆ ನಿರಂತರವಾಗಿ ಏಕೆ ನಿಗಾ ವಹಿಸುತ್ತಿಲ್ಲ. ಫಲಿತಾಂಶದಲ್ಲಿ ಏಕೆ ಹೆಚ್ಚಳ ಆಗುತ್ತಿಲ್ಲ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು ನಿರಂತರವಾಗಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಗಮನ ಕೊಡಿ ಎಂದು ಕಟ್ಟಪ್ಪಣೆ ಮಾಡಿದರು.

ವಿದ್ಯಾರ್ಥಿ ನಿಲಯಗಳಿಗೆ ಸಂಜೆ ವೇಳೆಗೆ ಭೇಟಿ ನೀಡಿ ಆಹಾರ ಪದಾರ್ಥಗಳು ಸಮರ್ಪಕವಾಗಿ ಆಗುತ್ತಿದೆಯೇ ಎಂಬುದನ್ನು ಪರಿಶೀಲಿಸಿ ಕೆಲವು ಆಶ್ರಮ ಶಾಲೆಗಳಲ್ಲಿ ರಾತ್ರಿ ವೇಳೆ ಮಕ್ಕಳು ಇರುವುದಿಲ್ಲ ಊಟದ ನಂತರ ಕೆಲ ಚಿಕ್ಕ ಮಕ್ಕಳನ್ನು ಮನೆಗೆ ಕರೆದುಕೊಂಡು ಹೋಗುತ್ತಾರೆ ಎಂಬ ದೂರುಗಳಿವೆ.

ಈ ಬಗ್ಗೆಯೂ ಪರಾಮರ್ಶೆ ನಡೆಸಿ ಪೋಷಕರಿಗೆ ಮನವರಿಕೆ ಮಾಡಿಕೊಡಿ ಎಂದು ಸೂಚಿಸಿದರು.

ಅನುದಾನ ಲಭ್ಯವಿದೆ ಎಂಬ ಕಾರಣಕ್ಕೆ ಬೇಡಿಕೆ ಇಲ್ಲದಿದ್ದರೂ ಹಾಸಿಗೆ, ಬೆಡ್‌ಶಿಟ್ ಮತ್ತಿತರ ವಸ್ತುಗಳನ್ನು ಅನಗತ್ಯವಾಗಿ ಖರೀದಿಸುವುದನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ ಮುಖ್ಯಮಂತ್ರಿಗಳು 4ಜಿ ವಿನಾಯಿತಿ ಪಡೆದು ವಸ್ತುಗಳನ್ನು ಖರೀದಿಸುವ ಬದಲು ಟೆಂಡರ್ ಕರೆದು ಎಲ್ಲವನ್ನೂ ಖರೀದಿಸಿ ಎಂದು ಸೂಚಿಸಿದರು.


ಆಶ್ರಮ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಶೇ. 77ರಷ್ಟು ಫಲಿತಾಂಶ ಬಂದಿದೆ. ಫಲಿತಾಂಶ ಉತ್ತಮ ಪಡಿಸಿ, ಮೆಟ್ರಿಕ್‌ಪೂರ್ವದ 2,90,546 ವಿದ್ಯಾರ್ಥಿಗಳಿಗೆ 50.47 ಕೋಟಿ ರೂ. ವಿದ್ಯಾರ್ಥಿವೇತನ ಪಾವತಿ ಮಾಡಲಾಗಿದೆ.

ಹಾಗೆಯೇ ಮೆಟ್ರಿಕ್ ನಂತರದ 2,48,887 ವಿದ್ಯಾರ್ಥಿಗಳಿಗೆ 302.64 ಕೋಟಿ ರೂ. ವಿದ್ಯಾರ್ಥಿವೇತನ ಪಾವತಿಸಲಾಗಿದೆ.

ಪರಿಶಿಷ್ಟ ಪಂಗಡದ ಕಲ್ಯಾಣ ಇಲಾಖೆಯಡಿ 380 ವಿದ್ಯಾರ್ಥಿ ನಿಲಯಗಳು ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು 39,541 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಒದಗಿಸಿವೆ. ಇದಕ್ಕಾಗಿ 194.71 ಕೋಟಿ ರೂ. ಒದಗಿಸಲಾಗಿದೆ ಎಂದರು.

ಈ ಸಭೆಯಲ್ಲಿ ಮುಖ್ಯಮಂತ್ರಿಗಳ ಅಪರ ಮುಖ್ಯಕಾರ್ಯದರ್ಶಿ ಎಲ್.ಕೆ ಅತೀಕ್, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಅಪರ ಮುಖ್ಯಕಾರ್ಯದರ್ಶಿ ಎನ್. ಮಂಜುನಾಥ್‌ಪ್ರಸಾದ್, ನಿರ್ದೇಶಕ ಕಲ್ಲೇಶ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ಗೋವಿಂದರಾಜು ನಸೀರ್‌ಅಹ್ಮದ್ ಉಪಸ್ಥಿತರಿದ್ದರು.

# ಆಕಸ್ಮಿಕವಾಗಿ ನಡೆದ ಅಗ್ನಿ ದುರಂತದಲ್ಲಿ ಪ್ರಾಣ ಕಳೆದುಕೊಂಡ ಕುಟುಂಬಕ್ಕೆ ಮುಖ್ಯಮಂತ್ರಿ ಐದುಲಕ್ಷ ಪರಿಹಾರ




ಬೆಂಗಳೂರು:–

ಪ್ರಪಂಚದಾದ್ಯಂತ ಹಲವು ರಾಷ್ಟ್ರಗಳಿಂದ ಅದರಲ್ಲೂ ಭಾರತೀಯರು ಕೆಲಸವನ್ನರಸಿ ಗಲ್ಫ್ ರಾಷ್ಟಗಳಿಗೆ ತಮ್ಮ ಜೀವನ ಗುಣಮಟ್ಟ ಸುಧಾರಣೆಗಾಗಿ ವಲಸೆ ಹೋಗುವುದು ಸರ್ವೆಸಾಮಾನ್ಯವಾಗಿದೆ. ದಿನಾಂಕ:12.06.2024ರಂದು ಕುವೈತ್‌ನ ಮಾಂಗಾಫ್‌ನಲ್ಲಿರುವ ವಸತಿ ಸಮುಚ್ಚಯವೊಂದರಲ್ಲಿ ಆಕಸ್ಮಿಕವಾಗಿ ನಡೆದ ಅಗ್ನಿ ದುರಂತದಲ್ಲಿ ಸುಮಾರು 45 ಭಾರತೀಯ ಪ್ರಜೆಗಳು ಸಾವನ್ನಪ್ಪಿದ್ದು, ಹಲವರು ತೀವ್ರ ನಿಗಾಘಟಕದಲ್ಲಿ ಚಿಕಿತ್ಸೆಯನ್ನು ಅಲ್ಲಿನ ಆಸ್ಪತ್ರೆಗಳಲ್ಲಿ ಪಡೆ–ಯುತ್ತಿದ್ದಾರೆ. ಇದೊಂದು ದುರಾದೃಷ್ಟಕರ ಸಂಗತಿಯಾಗಿದ್ದು ಘಟನೆಯ ಕುರಿತು ನಮ್ಮೆಲ್ಲರಿಗೂ ವಿಷಾಧವಿದೆ. ಈ ಸದರಿ ಅಗ್ನಿ ದುರಂತದಲ್ಲಿ ಪ್ರಾಣ ಕಳಕೊಂಡವರ ಪೈಕಿ ಕೇರಳ ರಾಜ್ಯದವರೇ ಹೆಚ್ಚಿನವರಾಗಿದ್ದು, ನಮ್ಮ ಕಲ್ಯಾಣ ಕರ್ನಾಟಕದ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನ ಸರಸಂಬ ಗ್ರಾಮದ 40 ವರ್ಷ ವಯಸ್ಸಿನ ಶ್ರೀ ವಿಜಯಕುಮಾರ್ ಬಿನ್ ಕೊಬ್ಬಣ್ಣ ಪ್ರಸನ್ನ ಸಹ ಒಬ್ಬರಾಗಿದ್ದರು. ಇವರು ವಾಹನ ಚಾಲಕರಾಗಿ ಕುವೈತ್‌ನಲ್ಲಿ ಸುಮಾರು 8 ವರ್ಷಗಳಿಂದ ನೆಲೆಸಿದ ಮೃತರ ಅವಲಂಬಿತ ಕುಟುಂಬದಲ್ಲಿ 8 ಸದಸ್ಯರಿದ್ದಾರೆ. ಸದರಿಯವರ ಮೃತ ದೇಹವನ್ನು ಕುವೈತ್ ನಿಂದ ಭಾರತಕ್ಕೆ ತರುವ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ಅನಿವಾಸಿ ಭಾರತೀಯ ಸಮಿತಿಯು ಭಾರತ ಸರ್ಕಾರದೊಂದಿಗೆ ಹಾಗೂ ಕುವೈತ್ ನ ರಾಯಭಾರಿ ಕಚೇರಿಯೊಂದಿಗೆ ನಿಕಟ ಸಂಪರ್ಕದಲ್ಲಿತ್ತು. ತದನಂತರ ಮೃತದೇಹವನ್ನು ಕೊಚ್ಚಿಯಿಂದ ಹೈದರಾಬಾದ್ ಮೂಲಕ ಮೃತರ ಸ್ವಗ್ರಾಮಕ್ಕೆ ತಲುಪಿಸುವಲ್ಲಿ ಸರ್ಕಾರದ ಅನೇಕ ಅಧಿಕಾರಿ ಸಿಬ್ಬಂದಿಗಳು ಕಾರ್ಯನಿರ್ವಹಿಸಿರುತ್ತಾರೆ. ನಂತರ ಹಸ್ತಾಂತರಿಸಲಾಗಿದೆ. ಮೃತ ದೇಹವನ್ನು ಕುಟುಂಬಸ್ಥರಿಗೆ ಈಗಾಗಲೇ ಕೇರಳ ರಾಜ್ಯ ಸರ್ಕಾರವು ಸದರಿ ಅಗ್ನಿ ದುರಂತದಲ್ಲಿ ಸತ್ತವರ ಕುಟುಂಬದ ಅವಲಂಭಿತ ಸದಸ್ಯರಿಗೆ ರೂ.5 ಲಕ್ಷಗಳ ಆರ್ಥಿಕ ಪರಿಹಾರ ಘೋಷಿಸಿದೆ. ಮುಂದುವರೆದು ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ ವತಿಯಿಂದ ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಕರ್ನಾಟಕ ರಾಜ್ಯ ಸರ್ಕಾರವು ಸಹ ದಿವಂಗತ ವಿಜಯಕುಮಾರ್ ಬಿನ್ ಕೊಬ್ಬಣ್ಣ ಪ್ರಸನ್ನ ಇವರ ಕುಟುಂಬಕ್ಕೆ ಗರಿಷ್ಠ ಮಟ್ಟದ ಆರ್ಥಿಕ ನೆರವನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಪಾವತಿಸುವಂತೆ ಕೋರಲಾಗಿತ್ತು. ಇದಕ್ಕೆ ಸ್ಪಂದಿಸಿದ ಮಾನ್ಯ ಮುಖ್ಯಮಂತ್ರಿಗಳು ಸದರಿ ಅವಲಂಬಿತ ಕುಟುಂಬದವರಿಗೆ ರೂ. ಐದು ಲಕ್ಷಗಳನ್ನು ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ನೀಡುವಂತೆ ಅನುಮೋದಿಸಿರುತ್ತಾರೆ ಎಂದು ಅನಿವಾಸಿ ಭಾರತೀಯ ಸಮಿತಿ, ಕರ್ನಾಟಕ ಉಪಾಧ್ಯಕ್ಷರ ಕಛೇರಿಯ ಆಪ್ತಸಹಾಯಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀ ಹೋಗುವೆ ಎಲ್ಲಿಗೆ..?

ಕನಸಲಿ ಪ್ರೀತಿಯ ಬೀಜ ಬಿತ್ತಿ
ಮನಸಲಿ ಕಲ್ಪನೆಯ
ಮೊಳಕೆಯೊಡೆದು
ಅಂತರಾಳದ ತುಡಿತಗಳಲಿ ಬಯಕೆಗಳು ಚಿವುಟಿ..
ನೀ ಹೋಗುವೆ ಎಲ್ಲಿಗೆ..?

ಬಾಳ ಹಣತೆಗೆ ಜ್ಯೋತಿಯಾಗಿ
ನಿನ್ನ ಬಾಳ ಬೆಳಗಲು
ಎನ್ನ ಅಂತರಾಳದ ಜ್ಯೋತಿಯು ಕತ್ತಲಾಗಿಸಿ
ನೀ ಹೋಗುವೆ ಎಲ್ಲಿಗೆ..?

ಬರಡಾದ ಬಾಳಲಿ ಮಳೆಯಾಗಿ ತಂಪಿಸಿ
ಆಸೆಯೆಂಬ ಮರವಾಗಿ ಕಂಗೊಳಿಸಿ
ಅದರ ನೆರಳಲಿ. ಪ್ರೀತಿ ಯೇನು ದಿಕ್ಕರಿಸಿ
ನೀ ಹೋಗುವೆ ಎಲ್ಲಿಗೆ..?

ಬಯಕೆಗಳು ಚಿವುಟಿ ಎಂದರೂ ಚಿಗುರುವೆ ನಾ
ಬಾಳ ಜ್ಯೋತಿಯ ಕತ್ತಲಾಗಿರಿಸಿದರೂ ಬೆಳಗುವೆ ನಾ
ಮಳೆಯ ಹನಿ ಬಿಟ್ಟರು ಮರದ ಹನಿ ಬಿಡದಂತೆ ನಾ
ನೀ ಎಲ್ಲಿ ಹೋದರೂ ನಿನ್ನಂತರಾಳವ ಬಿಡೆನು ನಾ
ನೀ ಹೋಗುವೆ ಎಲ್ಲಿಗೆ..?



**–ಡಾ.ವ್ಹಿ.ವ್ಹಿ.ಹಿರೇಮಠ**
ಅಧ್ಯಕ್ಷರು ಅಶ್ವಿನಿ ಪ್ರಕಾಶನ ಗದಗ.

